# ಕನ್ನಡ ವಿಶ್ವವಿದ್ಯಾಲಯ, ಹಂಪಿ

## ಮೈಕೊ ಕನ್ನಡ ಬಳಗ – ಸಹಯೋಗದಲ್ಲಿ

## ಪ್ರೋತ್ಸಾಹಧನ ವಿತರಣಾ ಸಮಾರಂಭ ಕಾರ್ಯಕ್ರಮ 15.03.2025

## ಯುವಪೀಳಿಗೆಗೆ ಕನ್ನಡ ಭಾಷೆಯ ಅಂತಃಸತ್ವದ ಪರಿಚಯವಾಗಬೇಕು

**– ವಿಜಯ್ ಪೂಣಚ್ಚ ತಂಬಂಡ**

ಇಂದಿನ ಯುವಜನಾಂಗಕ್ಕೆ ಕನ್ನಡ ಭಾಷೆಯ ಅಂತಃಸತ್ವದ ಪರಿಚಯವಾಗಬೇಕು. ಸರ್ಕಾರ ಮತ್ತು ಸಮಾಜ ವರ್ತಮಾನದಲ್ಲಿ ಕನ್ನಡ ಭಾಷೆಯ ಸಮಸ್ಯೆ-ಸವಾಲುಗಳನ್ನು ಅರಿತುಕೊಂಡು ಕನ್ನಡವನ್ನು ಕಟ್ಟುವ ಕಾರ್ಯದಲ್ಲಿ ನಿರತವಾಗಬೇಕು ಎಂದು ಕನ್ನಡ ವಿಶ್ವವಿದ್ಯಾಲಯದ ಕುಲಸಚಿವರಾದ **ಪ್ರೊ. ವಿಜಯ ಪೂಣಚ್ಚ ತಂಬಂಡ** ಅವರು ಅಭಿಪ್ರಾಯಪಟ್ಟರು.



ಮೈಕೊ ಕನ್ನಡ ಬಳಗ ಮತ್ತು ಕನ್ನಡ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಪ್ರೋತ್ಸಾಹಧನ ವಿತರಣಾ ಸಮಾರಂಭವನ್ನು ಗಣ್ಯಮಾನ್ಯರು ಉದ್ಘಾಟಿಸಿದರು.

ಕನ್ನಡ ವಿಶ್ವವಿದ್ಯಾಲಯದ ಮಂಟಪ ಸಭಾಂಗಣದಲ್ಲಿ **ಮೈಕೊ ಕನ್ನಡ ಬಳಗ** ಮತ್ತು ಕನ್ನಡ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ **ಪ್ರೋತ್ಸಾಹಧನ ವಿತರಣಾ ಸಮಾರಂಭ**ದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮುಂದುವರೆದು ಮಾತನಾಡುತ್ತ ಮೈಕೊ ಕನ್ನಡ ಬಳಗ ಯಾವುದೇ ಸರ್ಕಾರದ ಆರ್ಥಿಕತೆಯಿಲ್ಲದೆ ಸ್ವತಃ ಸಂಸ್ಥೆಯು ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ವಿತರಿಸುತ್ತಿರುವುದು ಶ್ಲಾಘನೀಯ ಕಾರ್ಯ. ಕನ್ನಡ ಮಾಧ್ಯಮದ ಬಡ ವಿದ್ಯಾರ್ಥಿಗಳಿಗೆ ನೆರವು ನೀಡುವ ಮೂಲಕ ಕನ್ನಡವನ್ನು ಉಳಿಸುವ ಮತ್ತು ಬೆಳೆಸುವ ಕಾರ್ಯದಲ್ಲಿ ನಿರತವಾಗಿದೆ ಹೀಗೆ ಮೈಕೋ ಕನ್ನಡ ಬಳಗ ಸಂಸ್ಥೆಯು ಇನ್ನೂ ಹೆಚ್ಚಾಗಿ ಬೆಳೆಯಬೇಕು ಕನ್ನಡ ವಿದ್ಯಾರ್ಥಿಗಳನ್ನು ಬೆಳೆಸಬೇಕು ಎಂದರು.






ಮೈಕೊ ಕನ್ನಡ ಬಳಗ ಮತ್ತು ಕನ್ನಡ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಪ್ರೋತ್ಸಾಹಧನ ವಿತರಣಾ ಸಮಾರಂಭದ ಅಧ್ಯಕ್ಷತೆ ವಹಿಸಿ ಕುಲಸಚಿವರಾದ ಡಾ. ವಿಜಯ್ ಪೂಣಚ್ಚ ತಂಬಂಡ ಮಾತನಾಡಿದರು

ಮೈಕೋ ಕನ್ನಡ ಬಳಗದ ಅಧ್ಯಕ್ಷರಾದ **ರಾಮತೀರ್ಥ ಕೆ.ಎಸ್**. ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ, ಮಾತನಾಡುತ್ತ ಕನ್ನಡಕ್ಕಾಗಿ ಇರುವ ಏಕೈಕ ವಿಶ್ವವಿದ್ಯಾಲಯ ಅದು ಕನ್ನಡ ವಿಶ್ವವಿದ್ಯಾಲಯ. ಈ ವಿಶ್ವವಿದ್ಯಾಲಯ ಉತ್ತಮವಾಗಿ ನಡೆದುಕೊಂಡು ಸಾಗುತ್ತಿದೆ. ಇಲ್ಲಿರುವ ವಿದ್ಯಾರ್ಥಿಗಳ ಬೆಳೆದರೆ ಕನ್ನಡ ಬೆಳೆಯುತ್ತದೆ. ಈ ವಿಶ್ವವಿದ್ಯಾಲಯ ಬೆಳಯಬೇಕೆಂಬುದು ಮೈಕೊ ಕನ್ನಡ ಬಳಗದ ಆಶಯ. ಕನ್ನಡವನ್ನು ಉಳಿಸಿ, ಬೆಳೆಸಿ. ಕನ್ನಡ ಬೆಳೆಸಬೇಕಾದರೆ ವಿದ್ಯಾರ್ಥಿಗಳು ಬೆಳೆಯಬೇಕು ಎಂದು ತಿಳಿಸಿದರು.







ಮೈಕೊ ಕನ್ನಡ ಬಳಗ ಮತ್ತು ಕನ್ನಡ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಪ್ರೋತ್ಸಾಹಧನ ವಿತರಣಾ ಸಮಾರಂಭವನ್ನು ಉದ್ಘಾಟಿಸಿ ಮೈಕೋ ಕನ್ನಡ ಬಳಗದ ಅಧ್ಯಕ್ಷರಾದ ರಾಮತೀರ್ಥ ಕೆ.ಎಸ್. ಹಾಗೂ ಮುಖ್ಯ ಅತಿಥಿಗಳಾದ ಮೈಕೋ ಕನ್ನಡ ಬಳಗದ ಸಹ ಕಾರ್ಯದರ್ಶಿಗಳಾದ ಗುರುಪ್ರಸಾದ್ ಅವರು ಮಾತನಾಡಿದರು

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾದ ಮೈಕೋ ಕನ್ನಡ ಬಳಗದ ಸಹ ಕಾರ್ಯದರ್ಶಿಗಳಾದ **ಗುರುಪ್ರಸಾದ್ ಅವರು** ಮಾತನಾಡುತ್ತ ಸಾಹಿತಿ ಪ್ರೊ. ವೆಂಕಟಸುಬ್ಬಯ್ಯನವನರು ಕನ್ನಡ ವಿಶ್ವವಿದ್ಯಾಲಯಕ್ಕೆ ನೀಡಿದ್ದ ದೇಣಿಗೆಯು ಇಂದು ಗ್ರಾಮೀಣ ಪ್ರದೇಶದ ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವಾಗಿ ವಿತರಣೆಯಾಗುತ್ತಿರುವುದು ಸಂತೋಷದ ಸಂಗತಿ ಎಂದರು.

ಈ ಸಮಾರಂಭದಲ್ಲಿ 12 ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಮೈಕೊ ಕನ್ನಡ ಬಳಗದ ಪ್ರಧಾನ ಕಾರ್ಯದರ್ಶಿಗಳಾದ ಕೆ.ಬಸವರಾಜು ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಶೈಕ್ಷಣಿಕ ವಿಭಾಗದ ನಿರ್ದೇಶಕರು ಪ್ರೊ.ಎಸ್.ವೈ ಸೋಮಶೇಖರ್ ಅವರು ಸ್ವಾಗತಿಸಿದರು. ಅಧ್ಯಯನಂಗದ ನಿರ್ದೇಶಕರಾದ ಡಾ. ಅಮರೇಶ ಯತಗಲ್, ಮಹಿಳಾ ಅಧ್ಯಯನ ವಿಭಾಗದ ಮುಖ್ಯಸ್ಥರಾದ ಡಾ. ಶೈಲಜ ಇಂ. ಹಿರೇಮಠ, ಅಭಿವೃದ್ಧಿ ಅಧಯನ ವಿಭಾಗದ ಪ್ರೊ.ಜನಾರ್ಧನ ಹಾಗೂ ಬೋಧಕೇತರ ಸಿಬ್ಬಂದಿಗಳು, ಮೈಕೋ ಕನ್ನಡ ಬಳಗದ ಪದಾಧಿಕಾರಿಗಳು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕನ್ನಡ ವಿಶ್ವವಿದ್ಯಾಲಯ, ಹಂಪಿ
ವಿದ್ಯಾರಣ್ಯ ೫೮೩ ೨೭೬

ಮೈಕೊ ಕನ್ನಡ ಬಳಗ (ನೊ.೮೨೪)
ಬಾಷ್ ಲಿ., ಬಿಡದಿ ಘಟಕ, ರಾಮನಗರ ಜಿಲ್ಲೆ

## ಪ್ರೋತ್ಸಾಹಧನ ವಿತರಣಾ ಸಮಾರಂಭ

ಅಧ್ಯಕ್ಷತೆ
**ಪ್ರೊ. ಡಿ.ವಿ. ಪರಮಶಿವಮೂರ್ತಿ**
ಕುಲಪತಿಗಳು
ಕನ್ನಡ ವಿಶ್ವವಿದ್ಯಾಲಯ, ಹಂಪಿ

ಉದ್ಘಾಟನೆ
**ಶ್ರೀ ರಾಮತೀರ್ಥ ಕೆ.ಎಸ್.**
ಅಧ್ಯಕ್ಷರು, ಮೈಕೊ ಕನ್ನಡ ಬಳಗ
ಬಾಷ್ ಲಿ., ಬಿಡದಿ ಘಟಕ, ರಾಮನಗರ ಜಿಲ್ಲೆ

ಮುಖ್ಯ ಅತಿಥಿಗಳು
**ಶ್ರೀ ಗುರುಪ್ರಸಾದ್ ಜಿ.**
ಸಹ ಕಾರ್ಯದರ್ಶಿ, ಮೈಕೊ ಕನ್ನಡ ಬಳಗ
ಬಾಷ್ ಲಿ., ಬಿಡದಿ ಘಟಕ, ರಾಮನಗರ ಜಿಲ್ಲೆ

**ಪ್ರೊ. ವಿಜಯ್ ಪೂಣಚ್ಚ ತಂಬಂಡ**
ಕುಲಸಚಿವರು
ಕನ್ನಡ ವಿಶ್ವವಿದ್ಯಾಲಯ, ಹಂಪಿ

೧೫ ಮಾರ್ಚ್ ೨೦೨೫, ಶನಿವಾರ ಮಧ್ಯಾಹ್ನ ೩.೦೦ಕ್ಕೆ
ಮಂಟಪ ಸಭಾಂಗಣ, ವಿದ್ಯಾರಣ್ಯ

**ಎಲ್ಲರಿಗೂ ಸ್ವಾಗತ**

**ಪ್ರೊ. ವಿಜಯ್ ಪೂಣಚ್ಚ ತಂಬಂಡ**
ಕುಲಸಚಿವರು
ಕನ್ನಡ ವಿಶ್ವವಿದ್ಯಾಲಯ, ಹಂಪಿ

**ಪ್ರೊ. ಎಸ್.ವೈ. ಸೋಮಶೇಖರ್**
ನಿರ್ದೇಶಕರು, ಶೈಕ್ಷಣಿಕ
ಕನ್ನಡ ವಿಶ್ವವಿದ್ಯಾಲಯ, ಹಂಪಿ

**ಶ್ರೀ ಕೆ. ಬಸವರಾಜು**
ಪ್ರಧಾನ ಕಾರ್ಯದರ್ಶಿ
ಬಾಷ್ ಲಿ., ಮೈಕೊ ಕನ್ನಡ ಬಳಗ

ನಂ. 1 ಕನ್ನಡ ದಿನಪತ್ರಿಕೆ
ವಿಜಯವಾಣಿ
VIJAYAVANI >> GANGAVATI
ಸೋಮವಾರ 17 ಮಾರ್ಚ್ 2025
17 MARCH 2025

# ಭಾಷೆಯ ಸಮಸ್ಯೆ-ಸವಾಲು ಎಲ್ಲರೂ ಅರಿತುಕೊಳ್ಳಲಿ



ಕನ್ನಡ ವಿವಿ ಮಂಟಪ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಪ್ರೋತ್ಸಾಹಧನ ವಿತರಣಾ ಸಮಾರಂಭವನ್ನು ಕುಲಸಚಿವ ಪ್ರೊ.ವಿಜಯ ಪೂಣಚ್ಚ ತಂಬಂಡ ಉದ್ಘಾಟಿಸಿದರು. ಮೈಕೋ ಕನ್ನಡ ಬಳಗದ ಸಹ ಕಾರ್ಯದರ್ಶಿ ಗುರುಪ್ರಸಾದ್, ಮೈಕೊ ಕನ್ನಡ ಬಳಗದ ಪ್ರಧಾನ ಕಾರ್ಯದರ್ಶಿ ಕೆ.ಬಸವರಾಜು, ಶೈಕ್ಷಣಿಕ ವಿಭಾಗದ ನಿರ್ದೇಶಕ ಪ್ರೊ.ಎಸ್.ವೈ.ಸೋಮಶೇಖರ್ ಇತರರಿದ್ದರು.

■ ವಿಜಯವಾಣಿ ಸುದ್ದಿಜಾಲ ಹೊಸಪೇಟೆ
ಇಂದಿನ ಯುವಜನಾಂಗಕ್ಕೆ ಕನ್ನಡ ಭಾಷೆಯ ಮಹತ್ವ ಪರಿಚಯವಾಗಲಿ. ಸರ್ಕಾರ ಮತ್ತು ಸಮಾಜ ವರ್ತಮಾನದಲ್ಲಿ ಭಾಷೆಯ ಸಮಸ್ಯೆ-ಸವಾಲುಗಳನ್ನು ಅರಿತುಕೊಂಡು ಕನ್ನಡವನ್ನು ಕಟ್ಟುವ ಕಾರ್ಯದಲ್ಲಿ ನಿರತವಾಗಬೇಕು ಎಂದು ಕನ್ನಡ ವಿವಿ ಕುಲಸಚಿವ ಪ್ರೊ.ವಿಜಯ ಪೂಣಚ್ಚ ತಂಬಂಡ ಅಭಿಪ್ರಾಯಪಟ್ಟರು.

ಕನ್ನಡ ವಿವಿ ಮಂಟಪ ಸಭಾಂಗಣದಲ್ಲಿ ಶನಿವಾರ ಮೈಕೊ ಕನ್ನಡ ಬಳಗ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಪ್ರೋತ್ಸಾಹಧನ ವಿತರಣಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕನ್ನಡ ಮಾಧ್ಯಮದ ಬಡ ವಿದ್ಯಾರ್ಥಿಗಳಿಗೆ ನೆರವು ನೀಡುವ ಮೂಲಕ ಕನ್ನಡವನ್ನು ಉಳಿಸುವ ಮತ್ತು ಬೆಳೆಸುವ ಕಾರ್ಯದಲ್ಲಿ ನಿರತವಾಗಿದೆ. ಹೀಗೆ ಮೈಕೋ ಕನ್ನಡ ಬಳಗ ಸಂಸ್ಥೆಯು ಇನ್ನೂ ಹೆಚ್ಚಾಗಿ ಬೆಳೆಯಬೇಕು. ಕನ್ನಡ ವಿದ್ಯಾರ್ಥಿಗಳನ್ನು ಬೆಳೆಸಬೇಕು ಎಂದರು.

ಮೈಕೋ ಕನ್ನಡ ಬಳಗದ ಅಧ್ಯಕ್ಷ ಕೆ.ಎಸ್.ರಾಮತೀರ್ಥ ಉದ್ಘಾಟಿಸಿ ಮಾತನಾಡಿ, ಕನ್ನಡಕ್ಕಾಗಿ ಇರುವ ಏಕೈಕ ವಿವಿ ಅದು ಕನ್ನಡ ವಿವಿ. ಈ ವಿವಿ ಉತ್ತಮವಾಗಿ ನಡೆದುಕೊಂಡು ಸಾಗುತ್ತಿದೆ. ಇಲ್ಲಿರುವ ವಿದ್ಯಾರ್ಥಿಗಳ ಬೆಳೆದರೆ ಕನ್ನಡ ಬೆಳೆಯುತ್ತದೆ. ಕನ್ನಡವನ್ನು ಉಳಿಸಿ, ಬೆಳೆಸಿ. ಕನ್ನಡ ಬೆಳೆಸಬೇಕಾದರೆ ವಿದ್ಯಾರ್ಥಿಗಳು ಬೆಳೆಯಬೇಕು ಎಂದು ತಿಳಿಸಿದರು.

12 ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ವಿತರಿಸಲಾಯಿತು. ಮೈಕೋ ಕನ್ನಡ ಬಳಗದ ಸಹ ಕಾರ್ಯದರ್ಶಿ ಗುರುಪ್ರಸಾದ್, ಮೈಕೊ ಕನ್ನಡ ಬಳಗದ ಪ್ರಧಾನ ಕಾರ್ಯದರ್ಶಿ ಕೆ.ಬಸವರಾಜು, ಶೈಕ್ಷಣಿಕ ವಿಭಾಗದ ನಿರ್ದೇಶಕ ಪ್ರೊ.ಎಸ್.ವೈ. ಸೋಮಶೇಖರ್, ಅಧ್ಯಯನಂಗದ ನಿರ್ದೇಶಕ ಡಾ.ಅಮರೇಶ ಯತಗಲ್, ಮಹಿಳಾ ಅಧ್ಯಯನ ವಿಭಾಗದ ಮುಖ್ಯಸ್ಥೆ ಡಾ.ಶೈಲಜಾ ಇಂ.ಹಿರೇಮಠ, ಅಭಿವೃದ್ಧಿ ಅಧ್ಯಯನ ವಿಭಾಗದ ಪ್ರೊ.ಜನಾರ್ಧನ ಇತರರಿದ್ದರು.

ಉದಯವಾಣಿ
ಸೋಮವಾರ, ಮಾರ್ಚ್ 17, 2025

ಮೈಕೊ ಕನ್ನಡ ಬಳಗದ ವತಿಯಿಂದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ವಿತರಣೆ

# ಕನ್ನಡ ಭಾಷಾ ಅಂತಃಸತ್ವ ಅರಿವು ಅಗತ್ಯ: ತಂಬಂಡ

■ ಉದಯವಾಣಿ ಸಮಾಚಾರ
**ಹೊಸಪೇಟೆ:** ಇಂದಿನ ಯುವ ಜನಾಂಗಕ್ಕೆ ಕನ್ನಡ ಭಾಷೆಯ ಅಂತಃಸತ್ವದ ಪರಿಚಯವಾಗಬೇಕಿದೆ ಎಂದು ಕನ್ನಡ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ।ವಿಜಯ ಪೂಣಚ್ಚ ತಂಬಂಡ ಅಭಿಪ್ರಾಯಪಟ್ಟರು.

ಕನ್ನಡ ವಿಶ್ವವಿದ್ಯಾಲಯದ ಮಂಟಪ ಸಭಾಂಗಣದಲ್ಲಿ ಮೈಕೊ ಕನ್ನಡ ಬಳಗ ಮತ್ತು ಕನ್ನಡ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಪ್ರೋತ್ಸಾಹಧನ ವಿತರಣಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರ್ಕಾರ ಮತ್ತು ಸಮಾಜ ವರ್ತಮಾನದಲ್ಲಿ ಕನ್ನಡ ಭಾಷೆಯ ಸಮಸ್ಯೆ, ಸವಾಲುಗಳನ್ನು ಅರಿತು ಕನ್ನಡ ಕಟ್ಟುವ ಕಾರ್ಯದಲ್ಲಿ ನಿರತವಾಗಬೇಕು ಎಂದರು.

ಮೈಕೊ ಕನ್ನಡ ಬಳಗ ಯಾವುದೇ ಸರ್ಕಾರದ ನೆರವಿಲ್ಲದೇ, ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ವಿತರಿಸುತ್ತಿದೆ. ಕನ್ನಡ ಮಾಧ್ಯಮದ ಬಡ ವಿದ್ಯಾರ್ಥಿಗಳಿಗೆ ನೆರವು ನೀಡುವ ಮೂಲಕ ಕನ್ನಡವನ್ನು ಉಳಿಸುವ ಮತ್ತು ಬೆಳೆಸುವ ಕಾರ್ಯದಲ್ಲಿ ನಿರತವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ರರು.



ಹೊಸಪೇಟೆ: ಮೈಕೊ ಕನ್ನಡ ಬಳಗದ ವತಿಯಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ವಿತರಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿದ ಕನ್ನಡ ಬಳಗದ ಅಧ್ಯಕ್ಷ ರಾಮತೀರ್ಥ ಕೆ.ಎಸ್. ಮಾತನಾಡಿ, ಕನ್ನಡಕ್ಕಾಗಿ ಇರುವ ಏಕೈಕ ವಿಶ್ವವಿದ್ಯಾಲಯ ಇದು. ಕನ್ನಡ ವಿಶ್ವವಿದ್ಯಾಲಯದ ಬೆಳೆದರೆ ಕನ್ನಡ ಬೆಳೆಯುತ್ತದೆ. ಈ ವಿಶ್ವವಿದ್ಯಾಲಯ ಬೆಳಯಬೇಕೆಂಬುದು ಮೈಕೊ ಕನ್ನಡ ಬಳಗದ ಆಶಯ ಎಂದರು.

ಮೈಕೋ ಕನ್ನಡ ಬಳಗದ ಸಹ ಕಾರ್ಯದರ್ಶಿ ಗುರುಪ್ರಸಾದ್ ಮಾತನಾಡಿ, ಸಾಹಿತಿ ಪ್ರೊ। ವೆಂಕಟ ಸುಬ್ಬಯ್ಯನವನರು ಕನ್ನಡ ವಿಶ್ವವಿದ್ಯಾಲಯಕ್ಕೆ ನೀಡಿದ್ದ ದೇಣಿಗೆಯು ಇಂದು ಗ್ರಾಮೀಣ ಪ್ರದೇಶದ ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವಾಗಿ ವಿತರಣೆಯಾಗುತ್ತಿರುವುದು ಸಂತೋಷದ ಸಂಗತಿ ಎಂದರು.

12 ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನವನ್ನು ವಿತರಿಸಲಾಯಿತು. ಮೈಕೊ ಕನ್ನಡ ಬಳಗದ ಪ್ರಧಾನ ಕಾರ್ಯದರ್ಶಿ ಕೆ.ಬಸವರಾಜು, ಶೈಕ್ಷಣಿಕ ವಿಭಾಗದ ನಿರ್ದೇಶಕ ಪ್ರೊ।ಎಸ್.ವೈ. ಸೋಮಶೇಖರ್, ಅಧ್ಯಯನಾಂಗದ ನಿರ್ದೇಶಕ ಡಾ।ಅಮರೇಶ ಯತಗಲ್, ಮಹಿಳಾ ಅಧ್ಯಯನ ವಿಭಾಗದ ಮುಖ್ಯಸ್ಥ ಡಾ।ಶೈಲಜ ಇಂ. ಹಿರೇಮಠ, ಅಭಿವೃದ್ಧಿ ಅಧಯನ ವಿಭಾಗದ ಪ್ರೊ।ಜನಾರ್ಧನ ಮತ್ತಿತರರು ಇದ್ದರು.

ಸೋಮವಾರ,17 ಮಾರ್ಚ್ 2025,
ಗಂಗಾವತಿ

ವಿಜಯ ಕರ್ನಾಟಕ VK

ಮಾಹಿತಿ ಕೇಂದ್ರ

ಕುಲಸಚಿವ ಪ್ರೊ. ವಿಜಯ ಪೂಣಚ್ಚ ತಂಬಂಡ ಅಭಿಪ್ರಾಯ

# ಕನ್ನಡ ಕಟ್ಟುವ ಕಾರ್ಯವಾಗಲಿ

■ **ವಿಕ ಸುದ್ದಿಲೋಕ** ವಿಜಯನಗರ(ಹೊಸಪೇಟೆ)

ಇಂದಿನ ಯುವಜನಾಂಗಕ್ಕೆ ಕನ್ನಡ ಭಾಷೆಯ ಅಂತಃಸತ್ವದ ಪರಿಚಯವಾಗಬೇಕು. ಸರಕಾರ ಮತ್ತು ಸಮಾಜ ವರ್ತಮಾನದಲ್ಲಿ ಕನ್ನಡ ಭಾಷೆಯ ಸಮಸ್ಯೆ–ಸವಾಲುಗಳನ್ನು ಅರಿತುಕೊಂಡು ಕನ್ನಡವನ್ನು ಕಟ್ಟುವ ಕಾರ್ಯದಲ್ಲಿ ನಿರತವಾಗಬೇಕು ಎಂದು ಕನ್ನಡ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ.ವಿಜಯಪೂಣಚ್ಚ ತಂಬಂಡ ಅಭಿಪ್ರಾಯಪಟ್ಟರು.

ಇಲ್ಲಿನ ಕನ್ನಡ ವಿಶ್ವವಿದ್ಯಾಲಯದ ಮಂಟಪ ಸಭಾಂಗಣದಲ್ಲಿ ಮೈಕೊ ಕನ್ನಡ ಬಳಗದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಪ್ರೋತ್ಸಾಹಧನ ವಿತರಣಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮೈಕೊ ಕನ್ನಡ ಬಳಗ ಯಾವುದೇ ಸರಕಾರದ ಆರ್ಥಿಕತೆಯಿಲ್ಲದೆ ಸ್ವತಃ ಸಂಸ್ಥೆಯು ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ವಿತರಿಸುತ್ತಿರುವುದು ಶ್ಲಾಘನೀಯ ಕಾರ್ಯ. ಕನ್ನಡ ಮಾಧ್ಯಮದ ಬಡ ವಿದ್ಯಾರ್ಥಿಗಳಿಗೆ ನೆರವು ನೀಡುವ ಮೂಲಕ ಕನ್ನಡವನ್ನು ಉಳಿಸುವ ಮತ್ತು ಬೆಳೆಸುವ ಕಾರ್ಯದಲ್ಲಿ ನಿರತವಾಗಿದೆ. ಇನ್ನೂ ಹೆಚ್ಚಾಗಿ ಬೆಳೆದು ಕನ್ನಡ ವಿದ್ಯಾರ್ಥಿಗಳನ್ನು ಬೆಳೆಸಬೇಕು ಎಂದರು.

ಮೈಕೊ ಕನ್ನಡ ಬಳಗದ ಅಧ್ಯಕ್ಷ ರಾಮತೀರ್ಥ ಕೆ.ಎಸ್., ಉದ್ಘಾಟಿಸಿ ಮಾತನಾಡಿ, ಕನ್ನಡಕ್ಕಾಗಿ ಇರುವ ಏಕೈಕ ವಿಶ್ವವಿದ್ಯಾಲಯ ಅದು ಕನ್ನಡ ವಿಶ್ವವಿದ್ಯಾಲಯ. ಈ ವಿಶ್ವವಿದ್ಯಾಲಯ ಉತ್ತಮವಾಗಿ ನಡೆದುಕೊಂಡು ಸಾಗುತ್ತಿದೆ. ಇಲ್ಲಿರುವ ವಿದ್ಯಾರ್ಥಿಗಳ ಬೆಳೆದರೆ ಕನ್ನಡ ಬೆಳೆಯುತ್ತದೆ. ಈ ವಿಶ್ವವಿದ್ಯಾಲಯ ಬೆಳಯಬೇಕೆಂಬುದು ಮೈಕೊ ಕನ್ನಡ ಬಳಗದ ಆಶಯ. ಕನ್ನಡವನ್ನು ಉಳಿಸಿ, ಬೆಳೆಸಿ. ಕನ್ನಡ ಬೆಳೆಸಬೇಕಾದರೆ ವಿದ್ಯಾರ್ಥಿಗಳು ಬೆಳೆಯಬೇಕು ಎಂದು ತಿಳಿಸಿದರು.

### 12 ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ವಿತರಣೆ

ಬಳಗದ ಸಹ ಕಾರ್ಯದರ್ಶಿ ಗುರುಪ್ರಸಾದ್, ಪ್ರಧಾನ ಕಾರ್ಯದರ್ಶಿ ಕೆ.ಬಸವರಾಜು ಮಾತನಾಡಿದರು. ಇದೇ ವೇಳೆ 12 ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ವಿತರಿಸಲಾಯಿತು.

ಶೈಕ್ಷಣಿಕ ವಿಭಾಗದ ನಿರ್ದೇಶಕ ಪ್ರೊ.ಎಸ್.ವೈ. ಸೋಮಶೇಖರ್, ಅಧ್ಯಯನಾಂಗದ ನಿರ್ದೇಶಕ ಡಾ. ಅಮರೇಶ ಯತಗಲ್, ಮಹಿಳಾ ಅಧ್ಯಯನ ವಿಭಾಗದ ಮುಖ್ಯಸ್ಥೆ ಡಾ.ಶೈಲಜಾ ಹಿರೇಮಠ, ಅಭಿವೃದ್ಧಿ ಅಧಯನ ವಿಭಾಗದ ಪ್ರೊ.ಜನಾರ್ದನ ಹಾಗೂ ಬೋಧಕೇತರ ಸಿಬ್ಬಂದಿ ಇತರರಿದ್ದರು.



ಹೊಸಪೇಟೆಯ ಕನ್ನಡ ವಿಶ್ವವಿದ್ಯಾಲಯದಲ್ಲಿ ಮೈಕೊ ಕನ್ನಡ ಬಳಗದ ಸಹಯೋಗದಲ್ಲಿ ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ವಿತರಿಸಲಾಯಿತು. ಕುಲಸಚಿವ ಪ್ರೊ. ವಿಜಯ ಪೂಣಚ್ಚ ತಂಬಂಡ ಇನ್ನಿತರರಿದ್ದರು.

ಮಾಹಿತಿ ಕೇಂದ್ರ

ಪ್ರಜಾವಾಣಿ ಸೋಮವಾರ • ಮಾರ್ಚ್ 17, 2025

# ‘ಕನ್ನಡ ಕಟ್ಟುವ ಕಾರ್ಯದಲ್ಲಿ ನಿರತರಾಗಿ’

ಪ್ರಜಾವಾಣಿ ವಾರ್ತೆ

ಹೊಸಪೇಟೆ(ವಿಜಯನಗರ): ‘ಇಂದಿನ ಯುವಜನಾಂಗಕ್ಕೆ ಕನ್ನಡ ಭಾಷೆಯ ಅಂತಃಸತ್ವದ ಪರಿಚಯ ಮಾಡುವುದರ ಜೊತೆಗೆ, ವರ್ತಮಾನದಲ್ಲಿ ಭಾಷೆಯ ಸಮಸ್ಯೆ-ಸವಾಲುಗಳನ್ನು ಅರಿತುಕೊಂಡು ಕನ್ನಡ ಕಟ್ಟುವ ಕಾರ್ಯದಲ್ಲಿ ನಿರತವಾಗಬೇಕಿದೆ’ ಎಂದು ಕುಲಸಚಿವ ಪ್ರೊ. ವಿಜಯ ಪೂಣಚ್ಚ ತಂಬಂಡ ಅಭಿಪ್ರಾಯಪಟ್ಟರು.

ಸಮೀಪದ ಹಂಪಿ ಕನ್ನಡ ವಿಶ್ವವಿದ್ಯಾಲಯದಲ್ಲಿ ಮೈಕೊ ಕನ್ನಡ ಬಳಗದ ಸಹಯೋಗದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಪ್ರೋತ್ಸಾಹಧನ ವಿತರಣಾ ಸಮಾರಂಭದಲ್ಲಿ ಮಾತನಾಡಿದರು.

‘ಮೈಕೊ ಕನ್ನಡ ಬಳಗವು ಸರ್ಕಾರದ ಆರ್ಥಿಕ ಸಹಾಯ ಇಲ್ಲದೆ ಸ್ವತಃ ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ವಿತರಿಸುತ್ತಿರುವುದು ಶ್ಲಾಘನೀಯ. ಕನ್ನಡ ಮಾಧ್ಯಮದ ಬಡ ವಿದ್ಯಾರ್ಥಿಗಳಿಗೆ ನೆರವು ನೀಡುವ ಮೂಲಕ ಕನ್ನಡ ಉಳಿಸುವ ಮತ್ತು ಬೆಳೆಸುವ ಕಾರ್ಯದಲ್ಲಿ ನಿರತವಾಗಿದೆ’ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮೈಕೋ ಕನ್ನಡ ಬಳಗದ ಅಧ್ಯಕ್ಷ ಕೆ.ಎಸ್.ರಾಮತೀರ್ಥ ಮಾತನಾಡಿ, ‘ಕನ್ನಡಕ್ಕಾಗಿ ಇರುವ ಏಕೈಕ ವಿಶ್ವವಿದ್ಯಾಲಯ ಕನ್ನಡ ವಿಶ್ವವಿದ್ಯಾಲಯ. ಹೀಗಾಗಿ ಇಲ್ಲಿರುವ ವಿದ್ಯಾರ್ಥಿಗಳು ಬೆಳೆದರೆ ಕನ್ನಡ ಬೆಳೆಯುತ್ತದೆ. ಅಲ್ಲದೆ, ಕನ್ನಡ ಬೆಳೆಸಬೇಕಾದರೆ ವಿದ್ಯಾರ್ಥಿಗಳು ಬೆಳೆಯಬೇಕು’ ಎಂದರು.

ಬಳಗದ ಪ್ರಧಾನ ಕಾರ್ಯದರ್ಶಿ ಕೆ.ಬಸವರಾಜು, ಸಹ ಕಾರ್ಯದರ್ಶಿ ಗುರುಪ್ರಸಾದ್ ಮಾತನಾಡಿದರು. ಪ್ರೊ. ಎಸ್.ವೈ ಸೋಮಶೇಖರ್, ಪ್ರೊ. ಅಮರೇಶ ಯತಗಲ್, ಪ್ರೊ. ಶೈಲಜಾ ಹಿರೇಮಠ, ಪ್ರೊ. ಜನಾರ್ಧನ ಇದ್ದರು. 12 ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ವಿತರಿಸಲಾಯಿತು.



ಹೊಸಪೇಟೆ ಸಮೀಪದ ಹಂಪಿ ಕನ್ನಡ ವಿಶ್ವವಿದ್ಯಾಲಯದಲ್ಲಿ ಮೈಕೊ ಕನ್ನಡ ಬಳಗದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ಬಡ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ವಿತರಿಸಲಾಯಿತು